# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಆರ್.ಬಿ ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 632

ಉತ್ತರಿಸಬೇಕಾದ ದಿನಾಂಕ : 17.12.2021

ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರಸಂ. | ಪ್ರಶ್ನೆ | ಇಲಾಖೆಯ ಮಾಹಿತಿ |
|---|---|---|
| ಅ | ಪಂಚಾಯತ್ ಮಟ್ಟದಲ್ಲಿ ನಡೆಸುತ್ತಿರುವ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳ ವಿವರಗಳೇನು: | ಪಂಚಾಯತ್ ಮಟ್ಟದಲ್ಲಿ ನಡೆಸುತ್ತಿರುವ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದ ಯೋಜನೆಗಳ ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಿದೆ |
| ಆ | ಸರ್ಕಾರದಿಂದ ಗುರುತಿಸಲ್ಪಟ್ಟಂತಹ ಮಹತ್ವಾಕಾಂಕ್ಷೆಯ ಜಿಲ್ಲೆಗಳಾವುವು: | ಭಾರತ ಸರ್ಕಾರದ ನೀತಿ ಆಯೋಗದಿಂದ ಕರ್ನಾಟಕ ರಾಜ್ಯದ ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳು ಮಹತ್ವಾಕಾಂಕ್ಷೆ ಜಿಲ್ಲೆಗಳೆಂದು ಗುರುತಿಸಲ್ಪಟ್ಟಿರುತ್ತದೆ. |
| ಇ | ಅಂತಹ ಮಹತ್ವಾಕಾಂಕ್ಷೆ ಜಿಲ್ಲೆಗಳಲ್ಲಿ ಯಾವ ಯಾವ ವಿಶೇಷ ಯೋಜನೆಗಳನ್ನು ನಡೆಸಲಾಗುತ್ತಿದೆ ಮತ್ತು ಹಾಗಿದ್ದಲ್ಲಿ, ಅದರ ವಿವರಗಳೇನು? | ಅಂತಹ ಮಹತ್ವಾಕಾಂಕ್ಷೆ ಜಿಲ್ಲೆಗಳಲ್ಲಿ ಗ್ರಾಮೀಣ ಅಭಿವೃದ್ಧಿಗೆ ಪೂರಕವಾಗಿ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಗಳು, ನೀರು ಮತ್ತು ನೈರ್ಮಲ್ಯ, ಉದ್ಯೋಗ ನೀಡುವಂತಹ ಯೋಜನೆಗಳನ್ನು ಅನುಷ್ಠಾನಿಸಲಾಗುತ್ತಿದೆ. |

ಸಂಖ್ಯೆ: ಗ್ರಾಅಪ 154 ಯೋಉಮಾ 2021

**(ಕೆ.ಎಸ್.ಈಶ್ವರಪ್ಪ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

3403664/2021/PMI

RDPR/154/PMI/2021-PMI-RDPR SEC

## ವಿಧಾನ ಪರಿಷತ್ತು ಚುಕ್ಕೆ ಗುರುತಿಲ್ಲದ ಪ್ರ.ಸಂ: 632
## ಅನುಬಂಧ-1

| ಪಂಚಾಯತ್ ಮಟ್ಟದಲ್ಲಿ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದಂತೆ ನಡೆಸುತ್ತಿರುವ ಯೋಜನೆಗಳ ವಿವರ | | |
|---|---|---|
| ಕ್ರ ಸಂ. | ಯೋಜನೆ ಹೆಸರು | ಯೋಜನಾ ವಿವರ |
| ಗ್ರಾಮ ಪಂಚಾಯತ್ ಮಟ್ಟದಲ್ಲಿ | | |
| 1 | ಮಹತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀನ ಉದ್ಯೋಗ ಖಾತ್ರಿ ಯೋಜನೆ | ಗ್ರಾಮೀಣ ಪ್ರದೇಶಗಳಲ್ಲಿ ಬಡತನ ನಿವಾರಣೆಗಾಗಿ ಪ್ರತಿ ಅರ್ಹ ಕುಟುಂಬಗಳಿಗೆ ಕನಿಷ್ಠ 100 ದಿನಗಳ ಅಕುಷಲ ಉದ್ಯೋಗವನ್ನು ಒದಗಿಸುವುದು ಈ ಯೋಜನೆಯ ಉದ್ದೇಶವಾಗಿದೆ. ಕೇಂದ್ರ ಸರ್ಕಾರ ನಿಗದಿಪಡಿಸಿದ ದರದಂತೆ ಪ್ರತಿ ಮಾನವ ದಿನದ ಅಕುಷಲ ಕೆಲಸ ನಿರ್ವಹಣೆಗೆ ಕೂಲಿಯನ್ನು ಪಾವತಿಸಲಾಗುತ್ತಿದೆ. ಪ್ರಸ್ತುತ ಒಂದು ಮಾನವ ದಿನಕ್ಕೆ ರೂ.289 ಗಳನ್ನು ಪಾವತಿಸಲಾಗುತ್ತಿದೆ . ಈ ಯೋಜನೆಯಡಿ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ ಕಾಮಗಾರಿಗಳು, ಗ್ರಾಮಗಳಲ್ಲಿ ಶಾಲೆ, ಅಂಗನವಾಡಿ, ಆಟದ ಮೂದಾನ, ರಸ್ತೆಗಳು, ರಾಜೀವ್ ಗಾಂದಿ ಸೇವಾ ಕೇಂದ್ರ ಮತ್ತು ಗ್ರಾಮ ಪಂಚಾಯಿತಿ ಕಟ್ಟಡಗಳಂತಹ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲಾಗುವುದು. ಹಾಗೆಯೇ ಜಲಾ ನಯನ ಮಾದರಿಯಲ್ಲಿ ರೈತರ ಜಮೀನುಗಳ ಅಭಿವೃದ್ಧಿ, ಕೃಷಿ ಹೊಂಡಗಳ ನಿರ್ಮಾಣ, ಕೆರೆ ಹೂಳೆತ್ತುವುದು ಇತ್ಯಾದಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು. |
| 2 | ಸ್ವಚ್ಛ ಭಾರತ ಅಭಿಯಾನ | ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯ ಹಂತ-2ರ ಮಾರ್ಗಸೂಚಿಯಂತೆ ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆ ಕಾಯ್ದುಕೊಳ್ಳಲು ವೈಯಕ್ತಿಕ ಗೃಹ ಶೌಚಾಲಯ ನಿರ್ಮಾಣ ಸಮುದಾಯ ಶೌಚಾಲಯಗಳ ನಿರ್ಮಾಣ ಘನ ತ್ಯಾಜ್ಯ ನಿರ್ವಹಣೆ, ದ್ರವ ತ್ಯಾಜ್ಯ ನಿರ್ವಹಣೆ, ಮಲ ತ್ಯಾಜ್ಯ ನಿರ್ವಹಣೆ, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ, ಗೋಬರ್-ಧನ್ ಘಟಕಾಂಶಗಳನ್ನು ಅನುಷ್ಠಾನ ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. |

| ಕ್ರ ಸಂ. | ಯೋಜನೆ ಹೆಸರು | ಯೋಜನಾ ವಿವರ |
|---|---|---|
| 3 | ಗ್ರಾಮ ಪಂಚಾಯಿತಿಗಳಿಗೆ 15 ನೇ ಹಣಕಾಸು ಆಯೋಗ ಅನುದಾನ | 15 ನೇ ಹಣಕಾಸು ಆಯೋಗದ ಅನುದಾನ ಮಾರ್ಗಸೂಚಿ ಅನುಸಾರ ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಿದ ಅಭಿವೃದ್ಧಿ ಕಾಮಗಾರಿಗಳನ್ನು ಅನುಷ್ಠಾನಿಸಲು ಅವಕಾಶ ನೀಡಲಾಗಿರುತ್ತದೆ. |
| 4 | ಗ್ರಾಮ ಪಂಚಾಯಿತಿ ಅಭಿವೃದ್ಧಿ ಅನುದಾನ (ಶಾಸನಬದ್ಧ ಅನುದಾನ) | ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ವೇತನ ಹಾಗೂ ವಿದ್ಯುಚ್ಛಕ್ತಿ ಬಿಲ್ಲು ಪಾವತಿಗೆ ಅವಕಾಶವಿರುತ್ತದೆ. |
| **ತಾಲ್ಲೂಕು ಪಂಚಾಯತ್ ಮಟ್ಟದಲ್ಲಿ** | | |
| 1 | ತಾಲ್ಲೂಕು ಪಂಚಾಯಿತಿ ಅಭಿವೃದ್ಧಿ ಅನುದಾನ | ತಾಲ್ಲೂಕು ಪಂಚಾಯಿತಿ ಸಿದ್ಧಪಡಿಸುವ ಕ್ರಿಯಾ ಯೋಜನೆಯನ್ವಯ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನಕ್ಕೆ ಅವಕಾಶವಿರುತ್ತದೆ. |
| 2 | ತಾಲ್ಲೂಕು ಪಂಚಾಯಿತಿಗಳಿಗೆ 15 ನೇ ಹಣಕಾಸು ಆಯೋಗ ಅನುದಾನ | 15 ನೇ ಹಣಕಾಸು ಆಯೋಗದ ಅನುದಾನ ಮಾರ್ಗಸೂಚಿಯನ್ವಯ ಕಾಮಗಾರಿಗಳ ಅನುಷ್ಠಾನಕ್ಕೆ ಅವಕಾಶವಿರುತ್ತದೆ. |
| **ಜಿಲ್ಲಾ ಪಂಚಾಯತ್ ಮಟ್ಟದಲ್ಲಿ** | | |
| 1 | ಜಿಲ್ಲಾ ಪಂಚಾಯಿತಿ ಅಭಿವೃದ್ಧಿ ಅನುದಾನ | ಜಿಲ್ಲಾ ಪಂಚಾಯಿತಿಗಳ ತಾಲ್ಲೂಕು ಪಂಚಾಯಿತಿ ಸಿದ್ಧಪಡಿಸುವ ಯೋಜನೆಯ ರೀತ್ಯಾ ಕ್ರಿಯಾ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. |
| 2 | ಜಿಲ್ಲಾ ಪಂಚಾಯಿತಿಗಳಿಗೆ 15 ನೇ ಹಣಕಾಸು ಆಯೋಗ ಅನುದಾನ | 15 ನೇ ಹಣಕಾಸು ಆಯೋಗದ ಅನುದಾನ ಮಾರ್ಗಸೂಚಿಯನ್ವಯ ಕಾಮಗಾರಿಗಳ ಅನುಷ್ಠಾನಕ್ಕೆ ಅವಕಾಶವಿರುತ್ತದೆ. |

3403664/2021/PMI
RDPR/154/PMI/2021-PMI-RDPR SEC